ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ನಾರಾಯಣಪುರ ಜಲಾಶಯ ಹಾಗೂ ತುಂಗಭದ್ರಾ ಜಲಾಶಯ ಕಾಲುವೆಗಳ ಬಗ್ಗೆ

ಶ್ರೀ ಎನ್.ಎಸ್. ಬೋಸ್ ರಾಜು (ವಿಧಾನಸಭೆಯಿಂದ ಚುನಾಯಿತರಾದವರು :-

704 (942) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) NRBC ದಿಂದ 95 ಕಿ.ಮೀ ರವರೆಗೂ ಕಾಲುವೆಯ ಆಧುನೀಕರಣಕ್ಕೆ ಸರ್ಕಾರ ನೀಡಿರುವ ಅನುದಾನ ಎಷ್ಟು ; ಕಾಲುವೆಯ ಆಧುನೀಕರಣದ ಕಾಮಗಾರಿಯನ್ನು ಪ್ರಾರಂಭಿಸುವುದು ಯಾವಾಗ ;

(ಆ) ತುಂಗಭದ್ರಾ ಎಡದಂಡೆ ಕಾಲುವೆಯ ನವಲಿ ಗ್ರಾಮದ ಹತ್ತಿರ ಸಮತೋಲನ ಜಲಾಶಯ ನಿರ್ಮಿಸುವುದಕ್ಕೆ ವಿಸ್ತೃತ ಯೋಜನಾ ವರದಿಯನ್ನು (DPR) ಸಿದ್ದಪಡಿಸಲು ಸರ್ಕಾರ ನೀಡಿರುವ ಅನುದಾನ ಎಷ್ಟು ; ಇದಕ್ಕಾಗಿ ಟೆಂಡರ್ ಕರೆಯಲಾಗುವುದು ಯಾವಾಗ ;

(ಇ) ಕೃಷ್ಣಾ ನದಿಯ ಗೂಗಲ್ ಬ್ಯಾರೇಜ್‌ನಿಂದ ಗಣೆಕಲ್ಲಿ ಸಮತೋಲನ ಜಲಾಶಯಕ್ಕೆ ನೀರು ತುಂಬಿಸುವ ಯೋಜನೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಸದರಿ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸುವುದು ಯಾವಾಗ ; ಈ ಯೋಜನೆಯ ಮಂಜೂರಾತಿಗೆ ಬಾಕಿ ಇರುವ ಅನುದಾನ ಎಷ್ಟು?